**ದಿನಾಂಕಃ 17-07-2025 ರಂದು ಸಾಕ್ಷಿದಾರರನ್ನು ಕರೆಯಿಸಿ ಪ್ರಮಾಣ ವಚನ ಭೋದಿಸಲಾಯಿತು.**

ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ ಅದರಲ್ಲಿ ಬರೆದಿರುವ ವಿಷಯಗಳು ನಾನೇ ಹೇಳಿ ಬರೆಸಿದ್ದೇನೆ. ಸದರಿ ಸಂಗತಿಗಳು ಸತ್ಯದಿಂದ ಕೂಡಿರುತ್ತವೆ.

**ಮುಖ್ಯ ವಿಚಾರಣೆ ಅರ್ಜಿದಾರರ ಪರ ಶ್ರೀ ಎನ್ ಎಸ್ ಪಿ ವಕೀಲರಿಂದಃ**

ಅಪಘಾತಕ್ಕೆ ಸಂಬಂಧಿಸಿದ ಪ್ರ.ವ.ವರದಿಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ -1 ಎಂದು, ಪಿರ್ಯಾದಿಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ -2 ಎಂದು, ಸ್ಥಳ ಪಂಚನಾಮೆ ಹಾಗೂ ಪೋಟೋಗಳ ಹಾಗೂ ಹಾತ್ ನಕಾಶೆ(ಸ್ಕೆಚ್)ಯ ದೃಡೀಕೃತ ನಕಲನ್ನು ಕೊಟ್ಟಿದ್ದು ಹಾಗೂ ಹಾತ್ ನಕಾಶೆ(ಸ್ಕೆಚ್)ಯನ್ನು ಮತ್ತು ಪೋಟೋವನ್ನು ಕೊಟ್ಟಿದ್ದು ಅದನ್ನು ನಿ ಪಿ -3 ಎಂದು, ಐಎಂವಿ ವರದಿಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ -4 ಎಂದು,ದೋಷಾರೋಪಣೆ ಪಟ್ಟಿಯ ದೃಡೀಕೃತ ನಕಲನ್ನು ಕೊಟ್ಟಿದ್ದು ಅದನ್ನು ನಿ ಪಿ -5 ಎಂದು,ಗಾಯದ ಪ್ರಮಾಣ ಪತ್ರವನ್ನು ಕೊಟ್ಟಿದ್ದು ಅದನ್ನು ನಿ ಪಿ -6 ಎಂದು, ಅಂಗನ್ಯೂನತ ಪ್ರಮಾಣ ಪತ್ರವನ್ನು ಕೊಟ್ಟಿದ್ದು ಅದನ್ನು ನಿ ಪಿ 7 ಎಂದು, ಎಕ್ಸರೆ ಪಿಲಂ/ ಕ್ಷ-ಕಿರಣ ಫಿಲಂ ನ್ನು ಕೊಟ್ಟಿದ್ದು ಅದನ್ನು ನಿ ಪಿ- 8 ಎಂದು, ಡಿಸ್ಚಾರ್ಜ ಸಮ್ಮರಿಯನ್ನು ನಿ ಪಿ -9 ಎಂದು ಗುರುತಿಸಲಾಯಿತು.

ಅರ್ಜಿದಾರರ ಮೂಲ ಆದಾರ ಕಾರ್ಡ, ಪ್ಯಾನ್ ಕಾರ್ಡ, ಬ್ಯಾಂಕ್ ಪಾಸ್ ಬುಕ್ ಮೂಲ ದಾಖಲೆಗಳ ಜೊತೆ ಅವುಗಳ ನೋಟರಿ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಮೂಲ ದಾಖಲೆಗಳ ಜೊತೆ ಪರಿಶೀಲಿಸಿದ ನಂತರ ಸದರಿ ದಾಖಲೆಗಳು ದಿನ ಬಳಕೆಗೆ ಬೇಕಾಗಿರುವುದರಿಂದ ಅವುಗಳ ನೋಟರಿ ಪ್ರತಿಗಳನ್ನು ನಿ ಪಿ-10 ರಿಂದ ನಿ ಪಿ- 12 ಎಂದು ಗುರುತಿಸಲಾಯಿತು. ಅರ್ಜಿದಾರರ ಮೂಲ ಆದಾರ ಕಾರ್ಡ, ಪ್ಯಾನ್ ಕಾರ್ಡ, ಬ್ಯಾಂಕ್ ಪಾಸ್ ಬುಕ್ ಗಳನ್ನು ಅರ್ಜಿದಾರರಿಗೆ ಹಿಂದುರಿಗಿಸಲಾಯಿತು.

ಅರ್ಜಿಯಲ್ಲಿ ಕೇಳಿದಂತೆ ಅರ್ಜಿಯನ್ನು ಪುರಸ್ಕರಿಸಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ 2 ನೇ ಎದುರುದಾರರ ಪರ ಶ್ರೀ ಆರ್ ಎಸ್ ಎಸ್ ವಕೀಲರಿಂದಃ**

ಅಪಘಾತವಾದ ದಿನವೇ ಆಸ್ಪತ್ರೆಯಲ್ಲಿ ನಾನು ದಾಖಲಾಗಿದ್ದರಿಂದ ದೂರು ಕೊಡಲು ವಿಳಂಭವಾಗಿದೆ. ನಾನು ಅಪಘಾತದ ದಿನದಂದು ಬೈಕನ್ನು ಚಲಾಯಿಸುತ್ತಿದ್ದೆ ಹಿಂದಿನಿಂದ ಟಿಪ್ಪರ್ ಗಾಡಿ ಬಂದು ಡಿಕ್ಕಿ ಹೊಡೆಯಿತು. ನನ್ನ ನಿರ್ಲಕ್ಷತನದಿಂದ ಅಪಘಾತವಾಗಿದ್ದರಿಂದ 8 ದಿನಗಳ ನಂತರ ದೂರು ಕೊಟ್ಟಿದ್ದೇನೆ ಎಂದರೆ ಸರಿಯಲ್ಲ. ಟಿಪ್ಪರ್ ಗಾಡಿಯ ಚಾಲಕ ನಿಧಾನವಾಗಿ

ರಸ್ತೆಯ ಎಡಬದಿಯಲ್ಲಿ ಹೋಗುತ್ತಿದ್ದು ಆ ಕಾರಣ ಅಪಘಾತದಲ್ಲಿ ಅವನ ಏನೂ ತಪ್ಪಿಲ್ಲ ಎಂದರೆ ಸರಿಯಲ್ಲ. ಅಪಘಾತದ ವೇಳೆಯಲ್ಲಿ ನಾನು ಅತೀ ವೇಗವಾಗಿ ಬೈಕನ್ನು ಚಲಾಯಿಸುತ್ತಿದ್ದೇನು ಎಂದರೆ ಸರಿಯಲ್ಲ. ನಾನು ವೇಗವಾಗಿ ಬೈಕನ್ನು ಚಲಾಯಿಸಿಕೊಂಡು ಹೋಗುತ್ತಿರುವಾಗ ಒಮ್ಮಿಂದ ಒಮ್ಮೆಲೆ ಯಾವುದೇ ಸೂಚನೇ ನೀಡದೇ ಬ್ರೇಕನ್ನು ಹಾಕಿದ್ದರಿಂದ ಆ ಕಾರಣದಿಂದ ಹಿಂದಿನ ವಾಹನದಿಂದ ಡಿಕ್ಕಿಯಾಗಿರುತ್ತದೆ ಎಂದರೆ ಸರಿಯಲ್ಲ. ನನ್ನ ತಪ್ಪಿನಿಂದ ಅಪಘಾತ ಸಂಭವಿಸಿದ್ದರಿಂದ ಬೈಕಿನ ವಿಮಾ ಕಂಪನಿ ಮತ್ತು ಮಾಲೀಕರನ್ನು ಅರ್ಜಿಯಲ್ಲಿ ಪಕ್ಷಗಾರನನ್ನಾಗಿ ಕಾಣಿಸಬೇಕಾಗಿದ್ದು ಅವರನ್ನು ಅರ್ಜಿಯಲ್ಲಿ ಪಕ್ಷಗಾರರನ್ನಾಗಿ ಸೇರಿಸದೇ ಇರುವುದರಿಂದ ನಾನು ಸಲ್ಲಿಸಿದ ಅರ್ಜಿ ಕಾನೂನಿನ ಮೂಲಕ ಅರ್ಜಿ ಊರ್ಜಿತವಲ್ಲ ಎಂದರೆ ಸರಿಯಲ್ಲ. ನನ್ನ ಎಡಪಾದದ ಮೂಳೆ ಮುರಿತ ಆಗಿದೆ. ನಾನು ಚಿಕಿತ್ಸೆಗಾಗಿ ಒಂದು ಬಾರಿ ಮಾತ್ರ ಒಳರೋಗಿಯಾಗಿ ಮೆಗ್ಗಾನ ಆಸ್ಪತ್ರೆ ಶಿವಮೊಗ್ಗದಲ್ಲಿ ದಾಖಲಾಗಿದ್ದೇನು. ಬೇರೆ ಯಾವುದೇ ಆಸ್ಪತ್ರೆಯಲ್ಲಿ ನಾನು ಒಳರೋಗಿಯಾಗಿ ಚಿಕಿತ್ಸೆ ಪಡೆದಿಲ್ಲ ಎಂದರೆ ಸರಿಯಲ್ಲ. ನಾನು ದಿನಾಂಕ 16.03.2023 ರ ನಂತರ ಬೇರೆ ಎಲ್ಲಿಯೂ ಚಿಕಿತ್ಸೆ ತೆಗೆದುಕೊಂಡಿಲ್ಲ ನನಗೆ ಇನ್ನು ನೋವು ಎಂದು ಹೇಳುತ್ತಾರೆ. ಅಪಘಾತದಿಂದಾಗಿ ಸಣ್ಣ ಮೂಳೆ ಮುರಿತ ಆಗಿದ್ದು ಆ ಕಾರಣ ಚಿಕಿತ್ಸೆಯಿಂದಾಗ ಸಂಪೂರ್ಣ ಗುಣ ಹೊಂದಿದ್ದೇನೆ ಎಂದರೆ ಸರಿಯಲ್ಲ ಸಾಕ್ಷಿಯೂ ಸಂಪೂರ್ಣ ಗುಣಮುಖನಾಗಿಲ್ಲ ಎಂದು ನುಡಿಯುತ್ತಾರೆ.

ನನ್ನ ಮುಖ್ಯ ವಿಚಾರಣೆಯ ಪ್ರಮಾಣ ಪತ್ರದಲ್ಲಿಯ 4 ನೇ ಪ್ಯಾರಾದಲ್ಲಿ ನಾನು ನಮೂದು ಮಾಡಿದ ಚಿಕಿತ್ಸೆ ಹಾಗೂ ನೋವುಗಳ ಬಗ್ಗೆ ಹೇಳಿದ ಸಂಗತಿಗಳು ಸುಳ್ಳು ಇರುತ್ತವೆ ಎಂದರೆ ಸರಿಯಲ್ಲ. 60,000/- ಗಳಷ್ಟು ಹಣವನ್ನು ಚಿಕಿತ್ಸೆಗಾಗಿ ಖರ್ಚು ಮಾಡಿದ್ದೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನನಗೆ ಯಾವುದೇ ಅಂಗನ್ಯೂನತೆ ಇಲ್ಲದಿದ್ದರೂ ಸಹ ನನಗೆ ಚಿಕಿತ್ಸೆ ಕೊಡದ ವೈದ್ಯರಿಂದ ಸುಳ್ಳು ಅಂಗನ್ಯೂನತಾ ಪ್ರಮಾಣ ಪತ್ರವನ್ನು ಪಡೆದುಕೊಂಡು ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ನನಗೆ ಅಂಗನ್ಯೂನತೆ ಇಲ್ಲದ ಕಾರಣ ಚಿಕಿತ್ಸೆ ಕೊಟ್ಟ ವೈದ್ಯರು ನನಗೆ ಅಂಗನ್ಯೂನತೆ ಪ್ರಮಾಣ ಪತ್ರ ಕೊಟ್ಟಿಲ್ಲ ಎಂದರೆ ಸರಿಯಲ್ಲ. ಅಪಘಾತದ ಸಮಯದಲ್ಲಿ ಟಿಪ್ಪರ್ ಗಾಡಿ ಪರ್ಮಿಟ್ ಮತ್ತು ಎಪ್ ಸಿ ಇರಲಿಲ್ಲ ಎಂದರೆ ಸಾಕ್ಷಿಯೂ ಪರ್ಮಿಟ್ ಇರಲಿಲ್ಲ ಇನ್ಸುರನ್ಸ ಇತ್ತು ಎಂದು ಹೇಳುತ್ತಾರೆ. ಟಿಪ್ಪರ್ ಗಾಡಿಯ ಮಾಲೀಕರಿಗೆ ಪರ್ಮಿಟ್ ಇಲ್ಲ ಮತ್ತು ಎಪ್ ಸಿ ಇಲ್ಲ ಎಂದು ಅವರ ವಿರುದ್ಧ ಪ್ರಕರಣ ದಾಖಲು ಮಾಡಲಾಗಿದೆ ಎಂದರೆ ನನಗೆ ಗೊತ್ತಿಲ್ಲ. ಟಿಪ್ಪರ ಲಾರಿಯ ಚಾಲಕನಿಗೆ ಚಾಲನಾ ಪರವಾನಿಗೆ ಇರಲಿಲ್ಲ ಎಂದರೆ ಸರಿಯಲ್ಲ.

ಅಪಘಾತದ ಕಾಲಕ್ಕೆ ನನಗೆ 52 ವರ್ಷ ಆಗಿತ್ತು ಎಂದರೆ ಸರಿಯಲ್ಲ. ನಾನು ತಿಂಗಳಿಗೆ 30,000/- ದುಡಿಯುತ್ತೇನೆ ಎಂದು ಸುಳ್ಳು ಹೇಳಿದ್ದೇನೆ ಎಂದರೆ ಸರಿಯಲ್ಲ. ಟಿಪ್ಪರ್ ಗಾಡಿಗೆ

ಎಪ್ ಸಿ ಮತ್ತು ಪರ್ಮಿಟ್ ಇಲ್ಲದೇ ಇರುವುದರಿಂದ ವಿಮೆ ಷರತ್ತುಗಳ ಉಲ್ಲಂಘನೆಯಾಗಿದ್ದು ಆ ಕಾರಣ 2 ನೇ ಎದುರುದಾರರು ಪರಿಹಾರ ಕೊಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. ನನ್ನ ವಾಸಸ್ಥಾನ ಮತ್ತು ಅಪಘಾತ ಬೇರೆ ಜಿಲ್ಲೆಯಲ್ಲಿ ಆಗಿರುವುದರಿಂದ ಈ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಲು ಬರುವುದಿಲ್ಲ ಎಂದರೆ ಸರಿಯಲ್ಲ. ನನ್ನ ಪ್ರಮಾಣ ಪತ್ರದಲ್ಲಿ ನನ್ನ ವಾಸವನ್ನು ಕರೂರು ಅಂತಾ ಸುಳ್ಳು ತೋರಿಸಿರುತ್ತೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು).

ಓ. ಹೇ. ಕೇ. ಸರಿ ಇದೆ.

ಸಹಿ/–

(ಶ್ರೀಮತಿ ಹುಲ್ಲೂರ ಹೇಮಲತಾ ಬಸಪ್ಪ)

ಪ್ರಧಾನ ಹಿರಿಯ ದಿವಾಣಿ ನ್ಯಾಯಾಧೀಶರು,

ರಾಣೇಬೆನ್ನೂರು.